# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ. ಹೆಚ್. ರಸ್ತೆ, ತುಮಕೂರು–572 103

ಸಂಖ್ಯೆ: ತುವಿ: ಡಿಇವಿ–02:ಸಾ.ಕ–C.No767932025–26 | 1543 ದಿನಾಂಕ:16.08.2025

## ಸುತ್ತೋಲೆ

ವಿಷಯ: National Students Paryavaran Competition (NSPC) ನಲ್ಲಿ ಭಾಗವಹಿಸುವ ಸಂಬಂಧ ಅಗತ್ಯ ಕ್ರಮವಹಿಸುವ ಕುರಿತು.

ಉಲ್ಲೇಖ:1. ಸರ್ಕಾರದ ಪತ್ರ ಸಂಖ್ಯೆಕರಾಉಶಿಪ/ಇತರೆ/02/2025–26/57 ದಿನಾಂಕ:30.07.2025

2. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ: 14.08.2025

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, National Students Paryavaran Competition (NSPC) Co-Convenor ರವರು ತಮ್ಮ ಪತ್ರದಲ್ಲಿ ನಮೂದಿಸಿರುವ ಹವಮಾನ ಬದಲಾವಣೆಯ ಕುರಿತ ರಾಷ್ಟ್ರೀಯ ವಿದ್ಯಾರ್ಥಿಗಳ ಪರ್ಯಾಯ ಸ್ಪರ್ದೆ ಇಕೋಮೀಟರ್ ಅಪ್ಲಿಕೇಷನ್ ಆಧಾರಿತ ಆನ್‌ಲೈನ್ ಕಾರ್ಯಕ್ರಮವನ್ನು ಆಯೋಜಿಸಲು ಉದ್ದೇಶಿಸಿದ್ದು, ಇದು ದೇಶದ ಪರಿಸರದ ಸ್ಥಿತಿಯನ್ನು ಸುಧಾರಿಸಲು ಸಮರ್ಪಿತವಾಗಿರುವುದಾಗಿ ಇದು ಪದವಿ/ಸ್ನಾತಕೋತ್ತರ/ಸಂಶೋದನಾ ವಿದ್ಯಾರ್ಥಿಗಳು ಮತ್ತು ವಿದ್ಯಾರ್ಥಿಗಳಲ್ಲದವರಿಗೂ ಸಹ ಭಾಗವಹಿಸುತ್ತಿರುವುದಾಗಿ ತಿಳಿಸಿರುತ್ತಾರೆ. ವಿವಿಧ ಚಟುವಟಿಕೆಗಳು ಮತ್ತು ಜಾಗೃತಿ ಅಭಿಯಾನಗಳ ಮೂಲಕ ಪರಿಸರದ ಗುಣಮಟ್ಟವನ್ನು ಸುಧಾರಿಸಲು ಸ್ಪಷ್ಟ ಮತ್ತು ಅಳೆಯಬಹುದಾದ ಬದಲಾವಣೆಗಳನ್ನು ಮಾಡುವುದು ಇದರ ಗುರಿಯಾಗಿದ್ದು, ಪ್ರಸ್ತುತ ಸಾಲಿನಲ್ಲಿ ಮರಗಳನ್ನು ನೆಡುವುದು, ನೀರಿನ ಸಂರಕ್ಷಣೆ ಮತ್ತು ತ್ಯಾಜ್ಯವನ್ನು ಬೇರ್ಪಡಿಸುವುದೆಂದು ಪತ್ರದಲ್ಲಿ ಉಲ್ಲೇಖಿಸಿರುತ್ತಾರೆ.

ಈ ಹಿನ್ನೆಲೆಯಲ್ಲಿ ಸರ್ಕಾರದ ಪತ್ರದೊಂದಿಗೆ ಲಗತ್ತಿಸಿರುವ National Students Paryavaran Competition ಇವರ ಪತ್ರಗಳನ್ನು ಈ ಸುತ್ತೋಲೆಯೊಂದಿಗೆ ಲಗತ್ತಿಸಿದ್ದು, ಸದರಿ ಪತ್ರದಲ್ಲಿ ನಮೂದಿಸಿರುವ ಅಂಶಗಳಂತೆ ಅಗತ್ಯಕ್ರಮವಹಿಸಲು ಈ ಮೂಲಕ ತಿಳಿಸಲಾಗಿದೆ.

ಆದೇಶದ ಮೇರೆಗೆ

ಉಪಕುಲಸಚಿವರು

ಉಪಕುಲಸಚಿವರು
ಅಭಿವೃದ್ಧಿ ವಿಭಾಗ
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

ಗೆ,

1. ಅಧ್ಯಕ್ಷರು/ಸಂಯೋಜಕರು, ಎಲ್ಲಾ ಸ್ನಾತಕೋತ್ತರ ಅಧ್ಯಯನ ವಿಭಾಗಗಳು, ತುವಿತು.
2. ಅಧ್ಯಕ್ಷರು/ಸಂಯೋಜಕರು ಸ್ನಾತಕೋತ್ತರ ವಿಜ್ಞಾನ ವಿಭಾಗಗಳು,"ಜ್ಞಾನಸಿರಿ ಕ್ಯಾಂಪಸ್" ಬಿದರಕಟ್ಟೆ, ಹೆಬ್ಬೂರು ಹೋಬಳಿ, ತುವಿತು.
3. ಪ್ರಾಂಶುಪಾಲರು, ವಿಶ್ವವಿದ್ಯಾನಿಲಯ ಘಟಕ ಮತ್ತು ಸಂಯೋಜಿತ ಕಾಲೇಜುಗಳು, ತುವಿತು.
4. ಸಿಸ್ಟಮ್ ಅನಾಲಿಸ್ಟ್, ಗಣಕಯಂತ್ರ ವಿಭಾಗ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು–ಈ ಸುತ್ತೋಲೆಯನ್ನು ಸಂಬಂಧಿಸಿದವರಿಗೆ ಇ–ಮೇಲ್ ಮೂಲಕ ಕಳುಹಿಸಲು ಸೂಕ್ತ ಕ್ರಮವಹಿಸುವುದು.

ಪ್ರತಿಗಳು:

1. ಮಾನ್ಯ ಕುಲಪತಿಯವರ ಆಪ್ತ ಕಾರ್ಯದರ್ಶಿಗಳು, ತುವಿತು.
2. ಕಚೇರಿ ಪ್ರತಿ.